# ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 157 ಐಎಂಎಂ 2023

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ:22.09.2023

## ಅಧಿಸೂಚನೆ

**ವಿಷಯ:** 2023-24ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಮತ್ತು ಖಾಸಗಿ ಫಾರ್ಮಸಿ ಶಿಕ್ಷಣ ಸಂಸ್ಥೆಗಳ ಡಿ-ಫಾರ್ಮ ಕೋರ್ಸ್‌ಗೆ ಸರ್ಕಾರಿ ಕೋಟಾ ಸೀಟುಗಳಿಗೆ ಸೀಟ್ ಮ್ಯಾಟ್ರಿಕ್ಸ್ ನಿಗದಿಪಡಿಸುವ ಕುರಿತು.

**********

ಸರ್ಕಾರಿ ಅಧಿಸೂಚನೆ ಸಂಖ್ಯೆ: ಆಕುಕ 44 ಎಂಪಿಎಸ್ 2003 (2), ದಿನಾಂಕ:03.07.2003 ರನ್ವಯ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಜಿಯೋಥೆರಪಿ ಕೋರ್ಸ್‌ಗಳ ಪ್ರವೇಶಕ್ಕೆ ವಿದ್ಯಾರ್ಥಿಗಳ ಆಯ್ಕೆಗೆ ನಿಯಮಾವಳಿಗಳನ್ನು ರಚಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 123 ಐಎಂಎಂ 2023, ದಿನಾಂಕ:01.09.2023 ರಲ್ಲಿ 2023-24ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಖಾಸಗಿ ಫಾರ್ಮಸಿ ಶಿಕ್ಷಣ ಸಂಸ್ಥೆಗಳಲ್ಲಿರುವ ಡಿ.ಫಾರ್ಮಸಿ, ಬಿ.ಫಾರ್ಮಸಿ, ಬಿ.ಫಾರ್ಮಸಿ (ಲ್ಯಾಟರಲ್ ಎಂಟ್ರಿ), ಫಾರ್ಮ-ಡಿ, ಫಾರ್ಮ-ಡಿ (ಪೋಸ್ಟ್ ಬ್ಯಾಕ್ಯುಲರೇಟ್) ಮತ್ತು ಎಂ.ಫಾರ್ಮಸಿ ಕೋರ್ಸ್‌ಗಳ ಸರ್ಕಾರಿ ಮತ್ತು ಆಡಳಿತ ಮಂಡಳಿ ಸೀಟು ಅನುಪಾತ ಮತ್ತು ಖಾಸಗಿ ಫಾರ್ಮಸಿ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾ ಸೀಟುಗಳಿಗೆ ಶುಲ್ಕವನ್ನು ನಿಗಧಿಗೊಳಿಸಿದೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕಾಯಿದೆ 1994 ಸೆಕ್ಷನ್ 45(10)(ಬಿ) ರನ್ವಯ ಸರ್ಕಾರಿ ಮತ್ತು ಖಾಸಗಿ ಫಾರ್ಮಸಿ ಕಾಲೇಜುಗಳಲ್ಲಿ ಫಾರ್ಮಸಿ ಕೋರ್ಸ್‌ಗಳಿಗೆ ಸಂಬಂಧಪಟ್ಟಂತೆ ಮಂಜೂರಾದ ಸೀಟುಗಳ ಪೈಕಿ ಸರ್ಕಾರದಿಂದ ನಿಗದಿಪಡಿಸಿದ ಸೀಟುಗಳ ಅನುಪಾತದಂತೆ ಸರ್ಕಾರಿ ಕೋಟಾ ಸೀಟುಗಳಿಗೆ ಸರ್ಕಾರವು ಕಾಲಕಾಲಕ್ಕೆ ಹೊರಡಿಸಿರುವ ಮೀಸಲಾತಿ ನಿಯಮಗಳಿಗೆ ಅನುಗುಣವಾಗಿ ವಿದ್ಯಾರ್ಥಿಗಳನ್ನು ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಬೇಕಾಗಿರುತ್ತದೆ. ಅದರಂತೆ, 2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಮತ್ತು ಖಾಸಗಿ ಫಾರ್ಮಸಿ ಶಿಕ್ಷಣ ಸಂಸ್ಥೆಗಳಲ್ಲಿನ ಡಿ-ಫಾರ್ಮ ಕೋರ್ಸ್‌ಗೆ ಸರ್ಕಾರಿ ಕೋಟಾ ಸೀಟುಗಳ ಸೀಟ್ ಮ್ಯಾಟ್ರಿಕ್ಸ್‌ನ್ನು ಈ ಕೆಳಕಂಡಂತೆ ನಿಗದಿಪಡಿಸಿ, ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಅನುಬಂಧಗಳಂತೆ ಹೊರಡಿಸಲಾಗಿದೆ.

| ಕೋರ್ಸ್ ವಿವರ | ಮಹಾವಿದ್ಯಾಲಯಗಳ ಸಂಖ್ಯೆ | ಶೇಕಡಾವಾರು ಸರ್ಕಾರಿ ಸೀಟುಗಳ & ಅನುಬಂಧದ ವಿವರ |
|---|---|---|
| ಡಿ-ಫಾರ್ಮ | 223<br>(Standalone Colleges) | 20%<br>Annexure I to III |
| | 94<br>(Integrated Colleges) | 30 %<br>Annexure I |
| | 01<br>Govt. College of Pharmacy, Bangalore | 100% |
| | 93<br>(Except GCP) | 30 %<br>Annexure II & III |
| | State University (one college) | 40%<br>Annexure I to III |

2....

ಸರ್ಕಾರಿ ಕೋಟಾದ ಡಿ-ಫಾರ್ಮ ಕೋರ್ಸಿನ ಸೀಟುಗಳನ್ನು ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಬೆಂಗಳೂರು ವತಿಯಿಂದ ಹಂಚಿಕೆ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

S R Gorvara 22/9/23

**(ಶೈಲಾ ಆರ್. ಗೊರವರ)**
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾವೈಪ ಮತ್ತು ಸಮನ್ವಯ)

**ಇವರಿಗೆ:-**

1) ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2) ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ.ಕಾಳಿಂಗರಾವ್ ರಸ್ತೆ, ಸುಬ್ಬಯ್ಯ ವೃತ್ತ, ಬೆಂಗಳೂರು-27.
3) ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ ಆವರಣ, ಪಿ.ಕಾಳಿಂಗರಾವ್ ರಸ್ತೆ, ಸುಬ್ಬಯ್ಯ ವೃತ್ತ, ಬೆಂಗಳೂರು-27.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು

**ಪ್ರತಿ:**

1) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕ.